**ಸಾಕ್ಷಿಯನ್ನು ದಿಃ 11.09.2025 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು,

ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು,

ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು,

ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು,

ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 5 ಎಂದು,

ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು,

ಒಂದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು,

11 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 8 ಎಂದು,

6 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 9 ಎಂದು,

2 ಎಕ್ಸರೇ ಫೀಲಂ ಅನ್ನು ಹಾಜರು ಪಡಿಸಿದ್ದು ಒಟ್ಟಾಗಿ ನಿಪಿ. 10 ಎಂದು,

ಅಪ್ರಾಪ್ತ ಅರ್ಜಿದಾರರ ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 11 ಎಂದು,

ಸಾಕ್ಷಿಯ ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 12 ಎಂದು ಗುರುತಿಸಲಾಯಿತು.

ಅಪ್ರಾಪ್ತ ಅರ್ಜಿದಾರರ ಪಾನ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 13 ಎಂದು,

ಸಾಕ್ಷಿಯ ಪಾನ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 14 ಎಂದು ಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

(ನಿಪಿ. 11 ರಿಂದ 14 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ಸಮಯಾವಕಾಶವನ್ನು ಕೋರಿದ್ದು ನೀಡಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.